# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1259 (1265) |
| ಉತ್ತರಿಸುವ ದಿನಾಂಕ | 19-03-2025 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | ಶ್ರೀ ಶರಣಗೌಡ ಬಯ್ಯಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕಂದಾಯ ಇಲಾಖೆಯ ನೋಂದಣಿ ಮತ್ತು ಮುದ್ರಾಂಕ ವಿಭಾಗದಲ್ಲಿನ ಸಾಮಾನ್ಯ ಜೇಷ್ಠತಾ ಪಟ್ಟಿಯಲ್ಲಿ ದ್ವಿತೀಯ ದರ್ಜೆ ಸಹಾಯಕ ಮತ್ತು ಪ್ರಥಮ ದರ್ಜೆ ಸಹಾಯಕ ಉಪ ನೋಂದಣಾಧಿಕಾರಿ ಹಾಗೂ ಹಿರಿಯ ಉಪ ನೋಂದಣಾಧಿಕಾರಿಗಳು ಪದೋನ್ನತಿಗೆ ಅರ್ಹರಿದ್ದರೂ ಕೂಡ ಹೈದ್ರಾಬಾದ್ ಕರ್ನಾಟಕ ಮೀಸಲಾತಿಯನ್ನು ಆಯ್ಕೆ ಮಾಡಿರುವ ಕಾರಣ ಇವರಿಗೆ ಹೈದ್ರಾಬಾದ್ ಕರ್ನಾಟಕ ಮೀಸಲಾತಿ ಹುದ್ದೆಗಳು ಖಾಲಿ ಇರದೇ ಇರುವ ಕಾರಣ ಇವರುಗಳು ಪದೋನ್ನತಿಯಿಂದ ವಂಚಿತ ರಾಗುತ್ತಿರುವ ಅಂಶವು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಅಧಿಸೂಚನೆ ದಿನಾಂಕ: 08-10-2024 ಮತ್ತು ನೋಂದಣಿ ಮಹಾಪರಿವೀಕ್ಷಕರು ಮತ್ತು ಮುದ್ರಾಂಕಗಳ ಆಯುಕ್ತರ ಅಧಿಕೃತ ಜ್ಞಾಪನ ಪತ್ರ ದಿನಾಂಕ: 16-10-2024 ಮತ್ತು 06-11-2024 ರಲ್ಲಿ ಹೈದ್ರಾಬಾದ್ ಕರ್ನಾಟಕ ಪ್ರಾದೇಶಿಕ ರಾಜ್ಯ ಮಟ್ಟದ ವೃಂದ ಹಾಗೂ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಾದೇಶಿಕ ಸ್ಥಳೀಯ ವೃಂದದಲ್ಲಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಹಿರಿಯ ಉಪ ನೋಂದಣಾಧಿಕಾರಿಗಳು/ ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರುಗಳಿಗೆ ನಿಯಮಾನುಸಾರ ಮುಂಬಡ್ತಿಯನ್ನು ನೀಡಲಾಗಿದೆ. |
| ಆ | ಬಂದಿದ್ದಲ್ಲಿ ಬೇರೆ ಎಲ್ಲಾ ಇಲಾಖೆಗಳಲ್ಲಿ ಅರಣ್ಯ, ಪ್ರಾದೇಶಿಕ ಸಾರಿಗೆ, ಪೌರಾಡಳಿತ ಇಲಾಖೆ ಹಾಗೂ ಖಜಾನೆ ಇಲಾಖೆಗಳಲ್ಲಿ ಒಂದೇ ಹೈದ್ರಾಬಾದ್ ಕರ್ನಾಟಕ ಮೀಸಲಾತಿ ಜೇಷ್ಠತಾ ಪಟ್ಟಿ ಇದ್ದು, ನೋಂದಣಿ ಮತ್ತು ಮುದ್ರಾಂಕ ಇಲಾಖೆ ರಾಜ್ಯ ವ್ಯಾಪ್ತಿ ಇಲಾಖೆಯಾಗಿದ್ದರೂ ಪ್ರಾದೇಶಿಕ ಸ್ಥಳೀಯ ವೃಂದ ಮತ್ತು ರಾಜ್ಯ ಮಟ್ಟದ ಸ್ಥಳೀಯ ವೃಂದ ಎಂದು ಎರಡು ಜೇಷ್ಠತಾ ಪಟ್ಟಿಯನ್ನು ಮಾಡಿರುವ ಔಚಿತ್ಯವೇನು; | ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಪ್ರಾದೇಶಿಕ ಸ್ಥಳೀಯ ವೃಂದ ಮತ್ತು ರಾಜ್ಯ ಮಟ್ಟದ ಸ್ಥಳೀಯ ವೃಂದ ಎಂದು ಎರಡು ಜೇಷ್ಠತಾ ಪಟ್ಟಿಯನ್ನು ಪ್ರಸ್ತುತ ಅನುಸರಿಸುತ್ತಿದ್ದು, ಈ ಎರಡು ವೃಂದವನ್ನು ಒಂದುಗೂಡಿಸಿ ಒಂದೇ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ ಸಿಆಸು ಇಲಾಖೆಯ ಅಭಿಪ್ರಾಯವನ್ನು ಪಡೆದು ನಿಯಮಾನುಸಾರ ಮುಂದಿನ ಸೂಕ್ತ ಕ್ರಮವಹಿಸಲಾಗುವುದು. |
| ಇ | ಈ ಹಿನ್ನಲೆಯಲ್ಲಿ ಈ ಭಾಗದ ನೌಕರರು ಪದೋನ್ನತಿಯಿಂದ ವಂಚಿತರಾಗಿದ್ದು, ಈ ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಿಂದ ಪತ್ರ ಸಂಖ್ಯೆ:ಸಿಆಸುಇ/7/ ಹೈಕಉ/ 2021, ದಿನಾಂಕ: 26.03.2021ರ ಪ್ರಕಾರ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಜೇಷ್ಠತಾ ಪಟ್ಟಿಯಲ್ಲಿನ ನ್ಯೂನತೆಯನ್ನು ಸರಿಪಡಿಸುವಂತೆ ನಿರ್ದೇಶನ ನೀಡಿದ್ದರೂ ಸಹ ನೋಂದಣಿ ಮತ್ತು ಮುದ್ರಾಂಕ ಇಲಾಖೆ ಇಲ್ಲಿಯವರೆಗೂ ಯಾವುದೇ ಕ್ರಮವನ್ನು ಕೈಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಈ | ಹಾಗಿದ್ದಲ್ಲಿ ಈ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ಮಾಹಿತಿಯನ್ನು ಒದಗಿಸುವುದು) | |

**ಕಂಇ/95/ಎಂಎನ್‌ಎಸ್‌ಎ/2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು